**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**

**30.12.2025** **1.10 p.m.**

**<><><><>**

ಮುಖ್ಯಾಂಶಗಳು

1. ನೀತಿ ಆಯೋಗದ ಪ್ರಮುಖ ಅರ್ಥಶಾಸ್ತ್ರಜ್ಞರು ಹಾಗೂ ತಜ್ಞರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಸಭೆ
2. 'ವಿಕಸಿತ ಭಾರತ ಜಿ ರಾಮ್ ಜಿ' ಕಾಯ್ದೆ ವಿರುದ್ಧ ರಾಜ್ಯಗಳು ನಿರ್ಣಯ ಕೈಗೊಳ್ಳುವುದು, ಒಕ್ಕೂಟ ವ್ಯವಸ್ಥೆಗೆ ಧಕ್ಕೆ-ಸಚಿವ ಶಿವರಾಜ್‌ಸಿಂಗ್ ಚೌಹಾಣ್
3. ಎಚ್.ಎ.ಎಲ್ ಅಭಿವೃದ್ಧಿಪಡಿಸಿರುವ ಸ್ವದೇಶಿ ಹೆಲಿಕಾಪ್ಟರ್ 'ಧೃವ್ ಎನ್‌ಜಿ' ಹಾರಾಟಕ್ಕೆ ಬೆಂಗಳೂರಿನಲ್ಲಿ ಸಚಿವ ಕೆ.ಆರ್.ಮೋಹನ್ ನಾಯ್ದು ಚಾಲನೆ
4. ದಟ್ಟ ಮಂಜಿನ ವಾತಾವರಣದಲ್ಲಿ ರೈಲು ಸಂಚಾರ ವ್ಯವಸ್ಥೆ ಸುಗಮಗೊಳಿಸಲು ಹಲವು ಕ್ರಮ
5. ಮಹಿಳಾ ಟಿ-೨೦ ಕ್ರಿಕೆಟ್ ಸರಣಿ; ಶ್ರೀಲಂಕಾ ವಿರುದ್ಧದ ಅಂತಿಮ ಪಂದ್ಯ ಗೆದ್ದು, ಸಂಪೂರ್ಣ ಸರಣಿ ಕೈವಶದತ್ತ ಭಾರತದ ಚಿತ್ತ

<><><><>

ಪ್ರಧಾನಿ ನರೇಂದ್ರ ಮೋದಿ ಇಂದು ನೀತಿ ಆಯೋಗದಲ್ಲಿ ಪ್ರಮುಖ ಅರ್ಥಶಾಸ್ತ್ರಜ್ಞರು ಮತ್ತು ವಿಷಯ ತಜ್ಞರೊಂದಿಗೆ ಸಭೆ ನಡೆಸಲಿದ್ದಾರೆ. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಈ ಸಂವಾದದಲ್ಲಿ ಭಾಗವಹಿಸುವರು. ಈ ಚರ್ಚೆಯಲ್ಲಿ ಪ್ರಮುಖ ಆರ್ಥಿಕ ವಿಷಯಗಳ ಮೇಲೆ ಹೆಚ್ಚಿನ ಗಮನ ಕೇಂದ್ರೀಕರಿಸುವ ನಿರೀಕ್ಷೆಯಿದೆ. ದೇಶದ ಸದ್ಯದ ಆರ್ಥಿಕ ಪರಿಸ್ಥಿತಿ ಮತ್ತು ಭವಿಷ್ಯದ ಆದ್ಯತೆಗಳ ಕುರಿತು ತಜ್ಞರು ತಮ್ಮ ಅಭಿಪ್ರಾಯ ಹಂಚಿಕೊಳ್ಳಲು ಈ ಸಭೆಯು ವೇದಿಕೆಯಾಗಲಿದೆ. ಪ್ರಧಾನಿ ಅವರು ಮುಂಬರುವ ಕೇಂದ್ರ ಬಜೆಟ್ ಕುರಿತು ಅರ್ಥಶಾಸ್ತ್ರಜ್ಞರಿಂದ ಸಲಹೆ-ಸೂಚನೆಗಳನ್ನು ಆಲಿಸುವ ನಿರೀಕ್ಷೆಯಿದೆ. ದೇಶೀಯ ಮತ್ತು ಜಾಗತಿಕ ಎರಡೂ ಆರ್ಥಿಕ ದೂರದೃಷ್ಟಿಗಳೂ ಸಹ ಸಂವಾದದ ಪ್ರಮುಖವಾಗಿ ಚರ್ಚೆಗೊಳಪಡುವ ನಿರೀಕ್ಷೆಯಿದೆ. ಸರ್ಕಾರವು ಮುಂದಿನ ಹಂತದ ಆರ್ಥಿಕ ಯೋಜನೆಗೆ ಸಿದ್ಧತೆ ನಡೆಸುತ್ತಿರುವಾಗ ನೀತಿ ಆಯೋಗದಲ್ಲಿನ ಸಂವಾದವು ಅಮೂಲ್ಯವಾದ ಒಳನೋಟಗಳನ್ನು ಒದಗಿಸುವ ನಿರೀಕ್ಷೆಯಿದೆ.

<><><><>

ಗ್ರಾಮಗಳ ಸರ್ವಾಂಗೀಣ ಅಭಿವೃದ್ಧಿ ದೃಷ್ಟಿಯಿಂದ ವಿಕಸಿತ ಭಾರತ ಜಿ ರಾಮ್ ಜಿ ಕಾಯ್ದೆಗೆ ಸಂಸತ್ ಅನುಮೋದನೆ ನೀಡಿದೆ. ಆದರೆ, ರಾಜ್ಯಗಳು ಅದರ ವಿರುದ್ಧ ನಿರ್ಣಯವನ್ನು ಕೈಗೊಳ್ಳುವುದು ಒಕ್ಕೂಟ ವ್ಯವಸ್ಥೆಯ ಮೂಲ ಆಶಯಕ್ಕೆ ವಿರುದ್ಧವಾಗಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ಬೋಪಾಲ್‌ನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಅವರು, ಲೋಕಸಭೆಯಲ್ಲಿ ಮಸೂದೆ ಮೇಲೆ ೮ ಗಂಟೆಗೂ ಅಧಿಕ ಸಮಯ ಚರ್ಚೆ ನಡೆದಿದೆ. ನಾನು ಪ್ರತಿಯೊಬ್ಬ ಸಂಸದರ ಸಲಹೆಗಳನ್ನು ಟಿಪ್ಪಣಿ ಮಾಡಿಕೊಂಡು, ಅದಕ್ಕೆ ಉತ್ತರ ನೀಡಲು ಬಯಸಿದೆ. ಆದರೆ, ಪ್ರತಿಪಕ್ಷಗಳು ಅನಗತ್ಯ ಗದ್ದಲವನ್ನು ಉಂಟು ಮಾಡಿದವು. ಇದರಿಂದ ಸಂಸತ್ತಿನ ಘನತೆಗೂ ಸಹ ಕುಂದುಂಟಾಗಿದೆ ಎಂದು ಅವರು ತಿಳಿಸಿದ್ದಾರೆ. ಪಂಜಾಬ್ ಸರ್ಕಾರ ಕಾಯ್ದೆಯ ವಿರುದ್ಧ ನಿರ್ಣಯ ಕೈಗೊಳ್ಳಲು ಒಂದು ದಿನದ ವಿಶೇಷ ಅಧಿವೇಶನ ಕರೆದಿರುವುದರ ಕುರಿತು ಪ್ರತಿಕ್ರಿಯಿಸಿರುವ ಸಚಿವರು, ಇಂತಹ ಕ್ರಮ ಒಕ್ಕೂಟ ವ್ಯವಸ್ಥೆಯ ವಿರೋಧಿಯಾಗಿದೆ ಎಂದರು.

ಧ್ವನಿ: ಶಿವರಾಜ್ ಸಿಂಗ್ ಚೌಹಾಣ್, ಕೇಂದ್ರ ಸಚಿವ ( ೧೭ ಸೆಕೆಂಡ್ಸ್)

<><><><>

ಕೇಂದ್ರ ನಾಗರಿಕ ವಿಮಾನಯಾನ ಸಚಿವ ಕೆ.ಆರ್.ಮೋಹನ್ ನಾಯ್ಡು ಬೆಂಗಳೂರಿನಲ್ಲಿಂದು ಧೃವ್ ಎನ್‌ಜಿ ಹೆಲಿಕಾಪ್ಟರ್ ಹಾರಾಟಕ್ಕೆ ಚಾಲನೆ ನೀಡಿದರು. ಎಚ್‌ಎಎಲ್ ನ ಹೆಲಿಕಾಪ್ಟರ್ ವಿಭಾಗದಲ್ಲಿ ಇಂದು ಪರಿಶೀಲನೆ ನಡೆಸಿದ ಬಳಿಕ ಸಚಿವರು, ಹಾರಾಟಕ್ಕೆ ಹಸಿರು ನಿಶಾನೆ ತೋರಿದರು. ಈ ಸಂದರ್ಭದಲ್ಲಿ ಎಚ್.ಎ.ಎಲ್ ನ ಅಧ್ಯಕ್ಷ ಹಾಗೂ ವ್ಯವಸ್ಥಾಪಕ ನಿರ್ದೇಶಕ ಡಾ.ಡಿ.ಕೆ.ಸುಮಿಲ್ ಮತ್ತಿತರರು ಉಪಸ್ಥಿತರಿದ್ದರು. ಮುಂದಿನ ಪೀಳಿಗೆಯ ಈ ಅತ್ಯಾಧುನಿಕ ಲಘು ಹೆಲಿಕಾಪ್ಟರ್ ಅನ್ನು ಎಚ್.ಎ.ಎಲ್ ಸಂಸ್ಥೆ ಅಭಿವೃದ್ಧಿಪಡಿಸಿದ್ದು, ಅದನ್ನು ಈ ವರ್ಷದ ಆರಂಭದಲ್ಲಿ ನಡೆದ ಏರೋ ಶೋ-೨೦೨೫ರಲ್ಲಿ ಪ್ರದರ್ಶಿಸಲಾಗಿತ್ತು. ೬ ರಿಂದ ೧೪ ಪ್ರಯಾಣಿಕರ ಸಾಮರ್ಥ್ಯದ ಈ ಹೆಲಿಕಾಪ್ಟರ್ ಅನ್ನು ಪ್ರವಾಸೋದ್ಯಮ, ಗಣ್ಯರ ಪ್ರವಾಸ, ವಿಪತ್ತು ಮತ್ತು ಪ್ರವಾಹ ನಿರ್ವಹಣೆ ಮತ್ತಿತರ ಕಾರ್ಯಗಳಿಗೆ ಬಳಸಬಹುದಾಗಿದೆ. ಈ ಹೆಲಿಕಾಪ್ಟರ್ ಸ್ವದೇಶಿ ಶಕ್ತಿ ಇಂಜಿನ್ ಹೊಂದಿದೆ. ಜೊತೆಗೆ ಹಲವು ಆಧುನಿಕ ಸೌಕರ್ಯಗಳನ್ನು ಇದು ಒಳಗೊಂಡಿದೆ. ಗರಿಷ್ಠ ೨೮೫ ಕಿಲೋಮೀಟರ್ ವೇಗದಲ್ಲಿ ೬೩೦ ಕಿಲೋಮೀಟರ್ ದೂರವನ್ನು ಕ್ರಮಿಸಲಿದೆ. ಜೊತೆಗೆ

ಇದು ೨ ಸಾವಿರದ ೩೩೩ ಕೆಜಿ ತೂಕವನ್ನು ಹೊತ್ತೊಯ್ಯುವ ಸಾಮರ್ಥ್ಯ ಹೊಂದಿದೆ. ಲೈಫ್ ಜಾಕೆಟ್, ತುರ್ತು ಫ್ಲೋಟೇಷನ್ ಗೇರ್ ಸೇರಿದಂತೆ ಹಲವು ಸುರಕ್ಷಾ ಕ್ರಮಗಳನ್ನು ಈ ಹೆಲಿಕಾಪ್ಟರ್ ಹೊಂದಿದ್ದು, ಭಾರತದ ನಾಗರಿಕ ಹೆಲಿಕಾಪ್ಟರ್ ಮಾರುಕಟ್ಟೆ ವಿಸ್ತರಣೆಗೆ ಅತ್ಯಂತ ಮಹತ್ವದ ಕೊಡುಗೆ ನೀಡಲಿದೆ ಎಂದು ಬಣ್ಣಿಸಲಾಗುತ್ತಿದೆ.

<><><>

ದಟ್ಟ ಮಂಜಿನ ವಾತಾವರಣದಲ್ಲಿ ರೈಲು ಸಂಚಾರ ವ್ಯವಸ್ಥೆಯನ್ನು ಸುಗಮ ರೀತಿಯಲ್ಲಿ ಕೈಗೊಳ್ಳಲು ರೈಲ್ವೆ ಸಚಿವಾಲಯ ಹಲವು ಕ್ರಮಗಳನ್ನು ಕೈಗೊಂಡಿದೆ. ರೈಲ್ವೆ ತನ್ನ ಎಲ್ಲ ವಲಯಗಳಿಗೆ ರೈಲುಗಳ ಸಂಚಾರದ ಬಗ್ಗೆ ನಿಗಾ ಇರಿಸುವಂತೆ ಸೂಚಿಸಲಾಗಿದೆ. ಜೊತೆಗೆ ಸಕಾಲದಲ್ಲಿ ರೈಲುಗಳ ಪ್ರಯಾಣ ಖಾತರಿಪಡಿಸಲು ಹೆಚ್ಚುವರಿ ಬೋಗಿಗಳನ್ನು ಸಿದ್ದಪಡಿಸಿಕೊಳ್ಳುವಂತೆ ನಿರ್ದೇಶಿಸಿದೆ. ವಂದೇ ಭಾರತ್, ಶತಾಬ್ದಿ ಎಕ್ಸ್‌ಪ್ರೆಸ್ ರೈಲುಗಳಲ್ಲಿ ಹೆಚ್ಚುವರಿ ಬೋಗಿಗಳನ್ನು ಹೊಂದುವುದರ ಜೊತೆಗೆ ರೈಲುಗಳ ಮೇಲ್ವಿಚಾರಣೆಗೆ ಭಾರತೀಯ ರೈಲ್ವೆ ಕ್ಯಾಟರಿಂಗ್ ಮತ್ತು ಪ್ರವಾಸದ್ಯೋಮ ನಿಗಮ- ಐಆರ್‌ಸಿಟಿಸಿ ಯಲ್ಲಿ ನಿಯಂತ್ರಣ ಕೋಣೆಯನ್ನು ತೆರೆದು ರೈಲು ಸಂಚಾರಕ್ಕೆ ಸಂಬಂಧಿಸಿದ ಎಲ್ಲಾ ಸಮಸ್ಯೆಗಳನ್ನು ಬಗೆಹರಿಸುವಂತೆ ಸೂಚನೆ ನೀಡಲಾಗಿದೆ.

<><><>

೨೦೨೫ ಭಾರತದ ಅಭಿವೃದ್ಧಿ ಪಯಣದಲ್ಲಿ ಅತ್ಯಂತ ನಿರ್ಣಾಯಕ ವರ್ಷವಾಗಿದೆ. ಈ ವರ್ಷ ಹಲವು ನೀತಿಗಳು ಪ್ರಗತಿಯಾಗಿ ಮತ್ತು ಉದ್ದೇಶಗಳು ಪರಿಣಾಮವಾಗಿ ಪರಿವರ್ತನೆಗೊಂಡ ವರ್ಷವಾಗಿದೆ. ಆಕಾಶವಾಣಿ ಪ್ರಸ್ತುತಪಡಿಸುತ್ತಿರುವ 'ಸುಧಾರಣೆಗಳ ವರ್ಷ' ಸರಣಿಯಲ್ಲಿ ಇಂದು ೨೦೨೫ರಲ್ಲಿ ಸಾಂಸ್ಕೃತಿಕ ವಲಯದಲ್ಲಿ ಆಗಿರುವ ಭಾರತದ ಪ್ರಗತಿಯನ್ನು ಪ್ರಮುಖವಾಗಿ ಪ್ರಸ್ತುತಪಡಿಸಲಾಗುತ್ತಿದೆ.

ಈ ಕುರಿತ ಒಂದು ವರದಿ:

ಈ ವರ್ಷ ಭಾರತದ ಸಾಂಸ್ಕೃತಿಕ ಪುನರುತ್ಥಾನ ರಾಷ್ಟ್ರೀಯ ಮುಖ್ಯ ವಾಹಿನಿಯಲ್ಲಿ ಅತ್ಯಂತ ನಿರ್ಣಾಯಕ ಅಂಶವಾಗಿತ್ತು ಮತ್ತು ಕಳೆದೊಂದು ದಶಕದಲ್ಲಿ ಸ್ಥಿರವಾಗಿ ಅಭಿವೃದ್ಧಿಯಾಗುತ್ತಿರುವ ದೇಶದ ಸಾಂಸ್ಕೃತಿಕ ಹಿರಿಮೆ-ಗರಿಮೆಯನ್ನು ಪ್ರತಿಬಿಂಬಿಸುವ ಅಂಶಗಳು ಅಭಿವ್ಯಕ್ತಗೊಂಡಿವೆ. ಅಯೋಧ್ಯೆಯ ಶ್ರೀರಾಮ ಜನ್ಮಭೂಮಿ ನಿರ್ಮಾಣ ಕಾರ್ಯ ಪೂರ್ಣಗೊಂಡಿದ್ದು, ಈ ವರ್ಷದ

ಅವಿಸ್ಮರಣೀಯ ಕ್ಷಣವಾಗಿದೆ. ಪ್ರಧಾನಿ ನರೇಂದ್ರ ಮೋದಿ ನವೆಂಬರ್‌ನಲ್ಲಿ ನಡೆದ ಐತಿಹಾಸಿಕ ಕಾರ್ಯಕ್ರಮದಲ್ಲಿ ದೇವಾಲಯದ ಶಿಖರದ ಮೇಲೆ ಕೇಸರಿ ಧ್ವಜವನ್ನು ಹಾರಿಸಿದರು. ಇದು ಇತಿಹಾಸದ ಪುಟಗಳಲ್ಲಿ ಮಹತ್ವದ ಸಂಗತಿ ಎಂದು ದಾಖಲಾಗಿದೆ. ಅಂತೆಯೇ, ಈ ವರ್ಷ ಯೂನೆಸ್ಕೋದ ಅಮೂರ್ತ ಸಾಂಸ್ಕೃತಿಕ ಪರಂಪರೆಯ ಪಟ್ಟಿಯಲ್ಲಿ ದೀಪಾವಳಿ ಹಬ್ಬ ಸೇರ್ಪಡೆಯಾಗಿದ್ದು, ದೇಶವನ್ನು ಜಾಗತಿಕ ಪರಂಪರೆಯ ಶಕ್ತಿಯನ್ನಾಗಿ ಬಿಂಬಿಸಲು ಸಹಾಯಕವಾಗಿದೆ. ಅಂತೆಯೇ, ರಾಷ್ಟ್ರೀಯ ಗೀತೆ 'ವಂದೇ ಮಾತರಂ' ೧೫೦ ವರ್ಷ ಪೂರ್ಣಗೊಳಿಸಿದ್ದು, ಅದರ ಸಂಭ್ರಮಾಚರಣೆ ದೇಶಾದ್ಯಂತ ವರ್ಷವಿಡೀ ನಡೆಯುತ್ತಿದೆ. ಈ ಮಧ್ಯೆ, ಪ್ರಯಾಗ್‌ರಾಜ್‌ನಲ್ಲಿ ನಡೆದ ಮಹಾಕುಂಭಮೇಳ-೨೦೨೫ ಮತ್ತೊಂದು ಅದ್ಭುತಕ್ಕೆ ಸಾಕ್ಷಿಯಾಗಿದ್ದು, ಸುಮಾರು ೬೬ ಕೋಟಿ ಭಕ್ತರು ಪುಣ್ಯ ಸ್ನಾನದಲ್ಲಿ ಭಾಗಿಯಾಗಿದ್ದರು. ಅಷ್ಟೇ ಅಲ್ಲದೆ, ೨೦೨೫ ಸರ್ದಾರ್ ವಲ್ಲಭಬಾಯ್ ಪಟೇಲ್ ಅವರ ೧೫೦ನೇ ಜಯಂತಿ ಮತ್ತು ಡಾ.ಶ್ಯಾಮ್ ಪ್ರಸಾದ್ ಮುಖರ್ಜಿಯವರ ೧೨೫ನೇ ಜನ್ಮ ವರ್ಷಾಚರಣೆಗೆ ಸಾಕ್ಷಿಯಾಗಿದೆ. ಹೀಗೆ ಒಟ್ಟಾರೆ ೨೦೨೫ ಭಾರತದ ಸಾಂಸ್ಕೃತಿಕ ವಲಯದಲ್ಲಿ ಅತ್ಯಂತ ಸ್ಮರಣೀಯ ವರ್ಷವಾಗಿ ದಾಖಲಾಗಿದೆ.

<><><><>

ಬಾಂಗ್ಲಾದೇಶದ ಮಾಜಿ ಪ್ರಧಾನಿ ಮತ್ತು ಬಾಂಗ್ಲಾದೇಶ್ ನ್ಯಾಷನಲಿಸ್ಟ್ ಪಕ್ಷದ ಮುಖ್ಯಸ್ಥೆ ಖಾಲೀದ್ ಝಿಯಾ ಅವರು ನಿಧನರಾಗಿದ್ದಾರೆ. ಅವರಿಗೆ ೮೦ ವರ್ಷ ವಯಸ್ಸಾಗಿತ್ತು. ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಇಂದು ಬೆಳಗ್ಗೆ ಕೊನೆಯುಸಿರೆಳೆದಿದ್ದಾರೆ ಎಂದು ಪಕ್ಷದ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಲಾಗಿದೆ. ಎರಡು ಬಾರಿ ಬಾಂಗ್ಲಾದೇಶದ ಪ್ರಧಾನಿಯಾಗಿದ್ದ ಝಿಯಾ ಅವರು ಬಾಂಗ್ಲಾದ ರಾಜಕಾರಣದಲ್ಲಿ ಹಲವು ದಶಕಗಳ ಕಾಲ ಸೇವೆ ಸಲ್ಲಿಸಿದ್ದಾರೆ. ಖಾಲೀದ್ ಝಿಯಾ ಅವರ ನಿಧನಕ್ಕೆ ಪ್ರಧಾನಮಂತ್ರಿ ನರೇಂದ್ರ ಮೋದಿ ಸಂತಾಪ ವ್ಯಕ್ತಪಡಿಸಿದ್ದಾರೆ. ಪ್ರಧಾನಿ, ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಬಾಂಗ್ಲಾದ ಮೊದಲ ಮಹಿಳಾ ಪ್ರಧಾನಿಯಾಗಿದ್ದ ಝಿಯಾ ಅವರು, ಬಾಂಗ್ಲಾದೇಶದ ಅಭಿವೃದ್ಧಿಗೆ, ಭಾರತ-ಬಾಂಗ್ಲಾ ಸಂಬಂಧಗಳಿಗೆ ಮಹತ್ವದ ಕೊಡುಗೆಯನ್ನು ನೀಡಿದ್ದಾರೆ. ಹಾಗಾಗಿ ಅವರನ್ನ ಸದಾ ಸ್ಮರಿಸಲಾಗುವುದು ಎಂದು ಹೇಳಿದ್ದಾರೆ.

<><><><>

ವನಿತೆಯರ ಕ್ರಿಕೆಟ್‌ನಲ್ಲಿ, ಭಾರತ ತಂಡವು ೫ನೇ ಮತ್ತು ಅಂತಿಮ ಟಿ-೨೦ ಪಂದ್ಯದಲ್ಲಿ ಇಂದು ಕೇರಳದ ತಿರುವನಂತಪುರಂನ ಗ್ರೀನ್‌ಫೀಲ್ಡ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಶ್ರೀಲಂಕಾವನ್ನು ಎದುರಿಸಲಿದೆ. ಪಂದ್ಯವು ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಹರ್ಮನ್‌ಪ್ರೀತ್ ಕೌರ್ ನೇತೃತ್ವದ ಮಹಿಳಾ ತಂಡವು ಈಗಾಗಲೇ ೫ ಪಂದ್ಯಗಳ ಸರಣಿಯಲ್ಲಿ ೪-೦ಯಿಂದ ಮುನ್ನಡೆ ಸಾಧಿಸಿರುವುದರಿಂದ ಸರಣಿಯನ್ನು ಸಂಪೂರ್ಣ ಕೈವಶ ಮಾಡಿಕೊಳ್ಳಲು ಎದುರು ನೋಡುತ್ತಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಯವಾಯಿತು <><>